**All India Radio: Bangalore**
**National Bulletin In Kannada**
**21.08.2025 1.10pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.08.2025 1.10pm**

**<><><><>**

ಮುಖ್ಯಾಂಶಗಳು

೧. ವಿಪಕ್ಷಗಳ ಗದ್ದಲ: ಲೋಕಸಭೆ ಕಲಾಪ ಅನಿರ್ದಿಷ್ಟಾವಧಿಗೆ, ರಾಜ್ಯಸಭೆ ಕಲಾಪ ಮಧ್ಯಾಹ್ನ ಎರಡು ಗಂಟೆಗೆ ಮುಂದೂಡಿಕೆ

೨. ಉಪರಾಷ್ಟ್ರಪತಿ ಚುನಾವಣೆ: ಐ.ಎನ್.ಡಿ.ಐ.ಎ. ಒಕ್ಕೂಟದ ಅಭ್ಯರ್ಥಿಯಾಗಿ ಬಿ.ಸುದರ್ಶನ್ ರೆಡ್ಡಿ ನಾಮಪತ್ರ ಸಲ್ಲಿಕೆ

೩. ಭಾರತ-ರಷ್ಯಾ ದ್ವಿಪಕ್ಷೀಯ ವ್ಯಾಪಾರದಲ್ಲಿ ಐದು ಪಟ್ಟು ಹೆಚ್ಚಳ; ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್

೪. ಬಿಹಾರ, ಪಶ್ಚಿಮ ಬಂಗಾಳಕ್ಕೆ ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿ

೫. ಕಾಶ್ಮೀರದ ದಾಲ್ ಸರೋವರದಲ್ಲಿ ಇಂದಿನಿಂದ ಖೇಲೋ ಇಂಡಿಯಾ ಜಲ ಕ್ರೀಡಾ ಉತ್ಸವ

**><><><><><><><><><><**

ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಸೇರಿದಂತೆ ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷಗಳ ತೀವ್ರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಲೋಕಸಭೆ ಕಲಾಪವನ್ನು ಅನಿರ್ದಿಷ್ಟಾವಧಿಗೆ ಹಾಗೂ ರಾಜ್ಯಸಭೆಯ ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಗಿದೆ. ಲೋಕಸಭೆಯಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವಿಷಯದ ಕುರಿತು ಚರ್ಚೆಗೆ ಒತ್ತಾಯಿಸಿ, ವಿರೋಧ ಪಕ್ಷಗಳು ಪ್ರತಿಭಟನೆಯನ್ನು ಪ್ರಾರಂಭಿಸಿದವು. ಲೋಕಸಭಾಧ್ಯಕ್ಷ ಓಂ ಬಿರ್ಲಾ ಪ್ರಶ್ನೋತ್ತರ ಅವಧಿಯನ್ನು ಪ್ರಾರಂಭಿಸಿದರು. ಆದರೆ ಪ್ರತಿಪಕ್ಷಗಳ ಗದ್ದಲದಿಂದಾಗಿ ಅವರು ಸದನವನ್ನು ಮಧ್ಯಾಹ್ನದ ೧೨ ಗಂಟೆಗೆ ಮುಂದೂಡಿದರು. ಬಳಿಕ ಮಧ್ಯಾಹ್ನ ೧೨ ಗಂಟೆಗೆ ಪುನಃ ಸದನ ಸೇರಿದಾಗ, ವಿಪಕ್ಷಗಳ ಪ್ರತಿಭಟನೆ ಮುಂದುವರಿದ ಕಾರಣ,

ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಅನಿರ್ದಿಷ್ಟಾವಧಿಗೆ ಕಲಾಪವನ್ನು ಮುಂದೂಡಿದರು. ಇನ್ನೊಂದೆಡೆ, ರಾಜ್ಯಸಭೆಯಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ಉಪ ಸಭಾಪತಿ ಹರಿವಂಶ್ ಅವರು ನಾನಾ ವಿಷಯಗಳ ಕುರಿತು ವಿವಿಧ ರಾಜಕೀಯ ಪಕ್ಷಗಳಿಂದ ೧೮ ಮುಂದೂಡಿಕೆ ಸೂಚನೆಗಳನ್ನು ಸ್ವೀಕರಿಸಿರುವುದಾಗಿ ಹೇಳಿದರು. ಆದರೆ ತೀರ್ಪನ್ನು ಉಲ್ಲೇಖಿಸಿ ಅವರು ಸೂಚನೆಗಳನ್ನು ತಿರಸ್ಕರಿಸಿದರು. ಇದರ ನಂತರ, ವಿರೋಧ ಪಕ್ಷದ ಸದಸ್ಯರು ಘೋಷಣೆಗಳನ್ನು ಕೂಗಲು ಪ್ರಾರಂಭಿಸಿದರು.  ಉಪ ಸಭಾಪತಿಗಳು ಶೂನ್ಯ ವೇಳೆಯನ್ನು ನಡೆಸಲು ಪ್ರಯತ್ನಿಸಿದರು. ಆದರೆ ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವಿಷಯದ  ಕುರಿತು ವಿರೋಧ ಪಕ್ಷದ ಪ್ರತಿಭಟನೆಯಿಂದಾಗಿ, ಅದು ಸಾಧ್ಯವಾಗಲಿಲ್ಲ. ಗದ್ದಲ ಮುಂದುವರಿದಂತೆ, ಉಪ ಸಭಾಪತಿಯವರು ಸದನವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಿದರು.

><><><><><><><><><><

ಉಪರಾಷ್ಟ್ರಪತಿ ಚುನಾವಣೆಗಾಗಿ ಐ.ಎನ್.ಡಿ.ಐ.ಎ. ಒಕ್ಕೂಟದ ಅಭ್ಯರ್ಥಿಯಾಗಿ ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ಬಿ.ಸುದರ್ಶನ್ ರೆಡ್ಡಿ ಇಂದು ಸಂಸತ್ ಭವನದಲ್ಲಿ ತಮ್ಮ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಹಿರಿಯ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ, ಎನ್‌ಸಿಪಿ ನಾಯಕ ಶರದ್ ಪವಾರ್, ಸಮಾಜವಾದಿ ಪಕ್ಷದ ನಾಯಕ ರಾಮ್ ಗೋಪಾಲ್ ಯಾದವ್, ಡಿಎಂಕೆ ಪಕ್ಷದ ನಾಯಕ ತಿರುಚಿ ಶಿವ ಮತ್ತು ಟಿಎಂಸಿ ಪಕ್ಷದ ನಾಯಕ ಶತಾಬ್ದಿ ರಾಯ್ ಹಾಜರಿದ್ದರು. ನಾಮಪತ್ರ ಸಲ್ಲಿಸುವ ಮುನ್ನ, ಸುದರ್ಶನ್ ರೆಡ್ಡಿ ಅವರು ಸಂಸತ್ ಭವನ ಸಂಕೀರ್ಣದಲ್ಲಿರುವ ಪ್ರೇರಣಾ ಸ್ಥಳದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರಿಗೆ ಪುಷ್ಪ ನಮನ ಸಲ್ಲಿಸಿದರು. ಎನ್‌ಡಿಎ ಒಕ್ಕೂಟದ ಅಭ್ಯರ್ಥಿ ಸಿ.ಪಿ.ರಾಧಾಕೃಷ್ಣನ್ ಅವರು ನಿನ್ನೆ ತಮ್ಮ ನಾಮಪತ್ರ ಸಲ್ಲಿಸಿದರು. ಮುಂದಿನ ತಿಂಗಳು ೯ ರಂದು ಉಪರಾಷ್ಟ್ರಪತಿ ಚುನಾವಣೆ ನಡೆಯಲಿದೆ. ಶುಕ್ರವಾರ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಈ ತಿಂಗಳ ೨೫ ರೊಳಗೆ ನಾಮಪತ್ರಗಳನ್ನು ಹಿಂಪಡೆಯಬಹುದು.

><><><><><><><><><><

ಕಳೆದ ನಾಲ್ಕು ವರ್ಷಗಳಲ್ಲಿ, ಸರಕುಗಳಲ್ಲಿನ ಭಾರತ-ರಷ್ಯಾ ದ್ವಿಪಕ್ಷೀಯ ವ್ಯಾಪಾರವು ಐದು ಪಟ್ಟು ಹೆಚ್ಚಾಗಿದೆ. ೨೦೨೧ ರಲ್ಲಿ ೧೩ ಶತಕೋಟಿ ಡಾಲರ್‌ಗಳಿಂದ ೨೦೨೪-೨೫ ರಲ್ಲಿ ೬೮ ಶತಕೋಟಿ ಡಾಲರ್‌ಗಳಿಗೆ ತಲುಪಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಹೇಳಿದ್ದಾರೆ. ರಷ್ಯಾದ ಉಪ ಪ್ರಧಾನಿ ಡೆನಿಸ್ ಮಾಂಟುರೊವ್ ಅವರೊಂದಿಗೆ ಮಾಸ್ಕೋದಲ್ಲಿ ನಡೆದ ೨೬ ನೇ ಭಾರತ-ರಷ್ಯಾ ಅಂತರ-ಸರ್ಕಾರಿ ಆಯೋಗದ ಸಭೆಯ ಸಹ-ಅಧ್ಯಕ್ಷತೆಯನ್ನು ವಹಿಸಿಕೊಂಡು ಡಾ. ಜೈಶಂಕರ್ ಈ ವಿಷಯ ತಿಳಿಸಿದ್ದಾರೆ.

**ಧ್ವನಿ ; ಡಾ. ಎಸ್. ಜೈ ಶಂಕರ್, ವಿದೇಶಾಂಗ ಸಚಿವ (೨೫ ಸೆಕೆಂಡುಗಳು)**

ಇನ್ನೊಂದೆಡೆ, ಭಾರತ ಮತ್ತು ರಷ್ಯಾ ನಡುವಿನ ವಿಶೇಷ ಸವಲತ್ತು ಹೊಂದಿರುವ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಪ್ರಮುಖ ರಾಜತಾಂತ್ರಿಕ ಸಂವಾದದಲ್ಲಿ, ಡಾ. ಎಸ್.ಜೈಶಂಕರ್ ಇಂದು ಮಾಸ್ಕೋದಲ್ಲಿ ರಷ್ಯಾ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್ ಅವರನ್ನು ಭೇಟಿ ಮಾಡಿ, ಮಾತುಕತೆ ನಡೆಸಲಿದ್ದಾರೆ. ಈ ಮಾತುಕತೆಗಳು ಆರ್ಥಿಕ ಸ್ಥಿತಿಸ್ಥಾಪಕತ್ವ ಮತ್ತು ಬಹುಧ್ರುವೀಯ ಸಹಕಾರದ ಮೇಲೆ ಬಲವಾದ ಒತ್ತು ನೀಡುವ ಮೂಲಕ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ವ್ಯಾಪಕ ಶ್ರೇಣಿಯನ್ನು ಒಳಗೊಳ್ಳುವ ನಿರೀಕ್ಷೆಯಿದೆ.

**><><><><><><><><><><><**

ಪ್ರಧಾನಿ ನರೇಂದ್ರ ಮೋದಿ ನಾಳೆ ಬಿಹಾರ ಮತ್ತು ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ಪ್ರಧಾನಿಯವರು, ಬಿಹಾರದ ಗಯಾದಲ್ಲಿ ಸುಮಾರು ೧೩ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಿಲಾನ್ಯಾಸ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಪಶ್ಚಿಮ ಬಂಗಾಳಕ್ಕೆ ಭೇಟಿ ವೇಳೆ ಅವರು, ೫ ಸಾವಿರದ ೨೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಭೂಮಿಪೂಜೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಕೋಲ್ಕತ್ತಾದಲ್ಲಿ ಹೊಸದಾಗಿ ನಿರ್ಮಿಸಲಾದ ವಿಭಾಗಗಳಲ್ಲಿ ಮೆಟ್ರೋ ರೈಲು ಸೇವೆಗಳಿಗೆ ಅವರು ಹಸಿರು ನಿಶಾನೆ ತೋರಲಿದ್ದಾರೆ. ೧ ಸಾವಿರದ ೨೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ೬.೨ ಕಿಲೋಮೀಟರ್ ಉದ್ದದ ಆರು ಪಥಗಳ ಕೋನಾ ಎಕ್ಸ್‌ಪ್ರೆಸ್‌ವೇಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ.

ಈ ಉಪಕ್ರಮವು ಹೌರಾ, ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳು ಮತ್ತು ಕೋಲ್ಕತ್ತಾ ನಡುವಿನ ಸಂಪರ್ಕವನ್ನು ಹೆಚ್ಚಿಸುತ್ತದೆ.

><><><><><><><><><><

ಅರ್ಮೇನಿಯಾ, ಬೆಲಾರಸ್, ಕಝಾಕಿಸ್ತಾನ್, ಕಿರ್ಗಿಜ್ ಗಣರಾಜ್ಯ ಮತ್ತು ರಷ್ಯಾವನ್ನು ಒಳಗೊಂಡಿರುವ ಯುರೇಷಿಯನ್ ಆರ್ಥಿಕ ಒಕ್ಕೂಟ, ಮುಕ್ತ ವ್ಯಾಪಾರ ಒಪ್ಪಂದದ ಕುರಿತು ಮಾತುಕತೆಗಳನ್ನು ಪ್ರಾರಂಭಿಸಲು ಉಲ್ಲೇಖಿತ ನಿಯಮಗಳಿಗೆ ಭಾರತ ಸಹಿ ಹಾಕಿವೆ. ಮಾಸ್ಕೋದಲ್ಲಿ ವಾಣಿಜ್ಯ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಅಜಯ್ ಬದೂ ಮತ್ತು ಯುರೇಷಿಯನ್ ಆರ್ಥಿಕ ಆಯೋಗದ ವ್ಯಾಪಾರ ನೀತಿ ವಿಭಾಗದ ಉಪ ನಿರ್ದೇಶಕ ಮಿಖಾಯಿಲ್ ಚೆರೆಕೇವ್ ಈ ಒಪ್ಪಂದಕ್ಕೆ ಸಹಿ ಹಾಕಿದರು. ಪ್ರಸ್ತಾವಿತ ಒಪ್ಪಂದವು ರಫ್ತುಗಳನ್ನು ಹೆಚ್ಚಿಸುತ್ತದೆ. ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳನ್ನು ಬೆಂಬಲಿಸುತ್ತದೆ ಹಾಗೂ ಮಾರುಕಟ್ಟೆ ಪ್ರವೇಶವನ್ನು ಸುಲಭಗೊಳಿಸುತ್ತದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಭಾರತ ಮತ್ತು ಯುರೇಷಿಯನ್ ಆರ್ಥಿಕ ಒಕ್ಕೂಟದ ನಡುವಿನ ವ್ಯಾಪಾರ ವಹಿವಾಟು ೨೦೨೪ ರಲ್ಲಿ ೬೯ ಶತಕೋಟಿ ಡಾಲರ್‌ಗಳನ್ನು ತಲುಪಿದೆ. ಇದು ೨೦೨೩ ಕ್ಕಿಂತ ಶೇಕಡಾ ೭ ರಷ್ಟು ಹೆಚ್ಚಳವನ್ನು ದಾಖಲಿಸಿದೆ ಎಂದು ಸಚಿವಾಲಯ ಹೇಳಿದೆ.

><><><><><><><><><><

ಜಮ್ಮು ಮತ್ತು ಕಾಶ್ಮೀರದ ದಾಲ್ ಸರೋವರದಲ್ಲಿ ಮೊಟ್ಟಮೊದಲ ಖೇಲೋ ಇಂಡಿಯಾ ಜಲ ಕ್ರೀಡಾ ಉತ್ಸವ ಇಂದು ಆರಂಭವಾಗಲಿದೆ. ಮೂರು ದಿನಗಳ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ೩೬ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ ೪೦೦ಕ್ಕೂ ಹೆಚ್ಚು ಕ್ರೀಡಾಪಟುಗಳು ರೋಯಿಂಗ್, ಕಯಾಕಿಂಗ್ ಮತ್ತು ಕ್ಯಾನೋಯಿಂಗ್‌ನಲ್ಲಿ ೨೪ ಚಿನ್ನದ ಪದಕಗಳಿಗಾಗಿ ಸ್ಪರ್ಧಿಸುತ್ತಿದ್ದಾರೆ. ಇದು ಮೊದಲ ಮುಕ್ತ ರಾಷ್ಟ್ರೀಯ ಚಾಂಪಿಯನ್‌ಶಿಪ್ ಆಗಿದ್ದು, ಎಲ್ಲಾ ೨೪ ಪದಕ ಸ್ಪರ್ಧೆಗಳು ಒಲಿಂಪಿಕ್ ಕ್ರೀಡಾ ಕಾರ್ಯಕ್ರಮದ ಭಾಗವಾಗಿದೆ. ಪ್ರವಾಸೋದ್ಯಮವನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಈ ಉತ್ಸವವು ಮೂರು ಪ್ರದರ್ಶನ ಕಾರ್ಯಕ್ರಮಗಳು, ವಾಟರ್ ಸ್ಕೀಯಿಂಗ್, ದೋಣಿ ಸ್ಪರ್ಧೆ ಮತ್ತು ಡ್ರ್ಯಾಗನ್ ದೋಣಿ ಸ್ಪರ್ಧೆಯನ್ನು ಒಳಗೊಂಡಿದೆ. ಮಧ್ಯಪ್ರದೇಶ, ಉತ್ತರಾಖಂಡ,

ಒಡಿಶಾ ಮತ್ತು ಕೇರಳ, ೪೪ ಕ್ರೀಡಾಪಟುಗಳ ಅತಿದೊಡ್ಡ ತಂಡವನ್ನು ಕಳುಹಿಸುತ್ತಿವೆ.  ಇಂದು ಸಂಜೆ ೬ ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದೆ.

><><><><><><><><><><

ಅಮೆರಿಕ ಮತ್ತು ಭಾರತದ ನಡುವಿನ ದ್ವಿಪಕ್ಷೀಯ ಸಂಬಂಧ ಗಂಭೀರ ಅಪಾಯದಲ್ಲಿದೆ. ಚೀನಾದ ಬೆಳೆಯುತ್ತಿರುವ ಜಾಗತಿಕ ಪ್ರಭಾವವನ್ನು ಎದುರಿಸಲು ಅಮೆರಿಕ ಗುರಿಯನ್ನು ಹೊಂದಿದ್ದರೆ, ಭಾರತದೊಂದಿಗೆ ಸಂಬಂಧಗಳನ್ನು ಬಲಪಡಿಸುವುದು ನಿರ್ಣಾಯಕ ಎಂದು ವಿಶ್ವಸಂಸ್ಥೆಯಲ್ಲಿನ ಅಮೆರಿಕದ ಮಾಜಿ ರಾಯಭಾರಿ ನಿಕ್ಕಿ ಹ್ಯಾಲಿ ಅಭಿಪ್ರಾಯಪಟ್ಟಿದ್ದಾರೆ. ರಷ್ಯಾದಿಂದ ಭಾರತ ತೈಲ ಖರೀದಿಗೆ ಸಂಬಂಧಿಸಿದಂತೆ ಅಮೆರಿಕದ ಸುಂಕಗಳ ಕುರಿತು ಅಮೆರಿಕ ಮತ್ತು ಭಾರತದ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವಾಗ, ನಿಕ್ಕಿ ಹ್ಯಾಲಿ, ಈ ಎಚ್ಚರಿಕೆ ನೀಡಿದ್ದಾರೆ.

><><><><><><><><><><